# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2019/21/2018-19 ದಿನಾಂಕ: 11.12.2018

ಗೆ,
ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ)
ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಮಾನ್ಯರೆ

ವಿಷಯ: ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಪುನರಾವರ್ತಿತ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿಸಲು ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:- 1) ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2019/21/2018-19 ದಿ:20.09.18.

2) ಈ ಕಛೇರಿ ಸಮ ಸಂಖ್ಯೆ ಪತ್ರದ ದಿನಾಂಕ:15.10.2018 , 30.10.2018 & 31.10.2018

*******

ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಪುನರಾವರ್ತಿತ ಅಭ್ಯರ್ಥಿಗಳ (CCERR, CCEPR, NSR ಮತ್ತು NSPR) ಪರೀಕ್ಷಾ ಶುಲ್ಕವನ್ನು ಪಾವತಿಸಲು ದಿನಾಂಕ:15.11.2018ರವರೆಗೆ ವಿಸ್ತರಣೆ ಮಾಡಲಾಗಿತ್ತು.

ಆದರೆ ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು SATS ಜಾಲತಾಣದ ಮೂಲಕ ಅಪ್‌ಲೋಡ್ ಮಾಡಲು ಕೆಲವು ಶಾಲಾ ಮುಖ್ಯೋಪಾಧ್ಯಾಯರಲ್ಲಿ ಗೊಂದಲಗಳಿದ್ದ ಕಾರಣ ದಿನಾಂಕವನ್ನು ಪುನ: ವಿಸ್ತರಣೆ ಮಾಡಬೇಕೆಂದು ದೂರವಾಣಿಯ ಮುಖಾಂತರ / ಖುದ್ದಾಗಿ ಕೆಲವು ಅಭ್ಯರ್ಥಿಗಳು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಗೆ ಮನವಿ ಮಾಡಿರುತ್ತಾರೆ.

ಈ ಸಂಬಂಧ **ಪುನರಾವರ್ತಿತ ಅಭ್ಯರ್ಥಿಗಳ (CCERR, CCEPR, NSR ಮತ್ತು NSPR)** ಪರೀಕ್ಷಾ ಶುಲ್ಕವನ್ನು ಪಾವತಿಸಲು ಈ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿದೆ. ಆದ್ದರಿಂದ ಅಂತಿಮ ದಿನಾಂಕದೊಳಗೆ ಎಲ್ಲಾ ಅರ್ಹ ಪುನರಾವರ್ತಿತ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿ ಮಾಡುವಂತೆ ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) / ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ತಿಳಿಸುವುದು. ಹಾಗೂ ಜಿಲ್ಲೆ/ತಾಲ್ಲೂಕು ವ್ಯಾಪ್ತಿಯ ಸ್ಥಳೀಯ ದಿನಪತ್ರಿಕೆ ಹಾಗೂ ಇತರೆ ಮಾಧ್ಯಮಗಳ ಮೂಲಕ ಸದರಿ ವಿಷಯದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು/ಪೋಷಕರು/ವಿದ್ಯಾರ್ಥಿಗಳ ಗಮನಕ್ಕೆ ಬರುವಂತೆ ವ್ಯಾಪಕ ಪ್ರಚಾರವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

ಸದರಿ ಅಭ್ಯರ್ಥಿಗಳ ಮೂಲ ಎಂಎಸ್‌ಎ, ಮೂಲ ಎಂಎಸ್‌ಎ ಲಭ್ಯವಿಲ್ಲದಿದ್ದಲ್ಲಿ ಸಂಬಂಧಿಸಿದ ವಿಭಾಗೀಯ ಕಛೇರಿಯಿಂದ ಪಡೆದ ದೃಢೀಕೃತ ಎಂಎಸ್‌ಎ ಗಳನ್ನು ಹಾಗೂ ಪರೀಕ್ಷಾ ಶುಲ್ಕವನ್ನು ಹಿಂದಿನ ವರ್ಷದಂತೆ ನೆಫ್ಟ್ ಚಲನ್ ಮೂಲಕ ಬ್ಯಾಂಕ್‌ಗೆ ಜಮೆ ಮಾಡಿ ಅದರ ಮೂಲ ಪ್ರತಿಯೊಂದಿಗೆ ಈ ಕೆಳಕಂಡ ದಿನಾಂಕದೊಳಗೆ ಮಂಡಳಿಗೆ ಸಲ್ಲಿಸಲು ತಿಳಿಸಿದೆ.

| ಕ್ರ ಸಂ | ವಿವರ | ಈ ಹಿಂದೆ ನಿಗದಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಪುನರಾವರ್ತಿತ (CCERR, CCEPR, NSR ಮತ್ತು NSPR) ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಹಿಂದಿನ ಸಾಲಿನಂತೆ ನೆಫ್ಟ್ ಚಲನ್ ಮೂಲಕ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: | 15.11.2018 | 15.12.2018 |
| 2 | ಎಂಎಸ್‌ಎ, ನಾಮಿನಲ್‌ರೋಲ್ ಮತ್ತು ಪರೀಕ್ಷಾ ಶುಲ್ಕ ಪಾವತಿಸಿದ ನೆಫ್ಟ್ ಚಲನ್ ಮಂಡಳಿಗೆ ಸಲ್ಲಿಸಲು ಕೊನೆಯ ದಿನಾಂಕ | 30.11.2018 | 17.12.2018 |

ತಮ್ಮ ನಂಬುಗೆಯ,

(ವಿ. ಸುಮಂಗಲ) 11/12
ನಿರ್ದೇಶಕರು (ಪರೀಕ್ಷೆಗಳು)

A8_letter1